# ಅಧಿಕ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶಿರಾ.

## ಪ್ರಕರಣ ಸಂಖ್ಯೆಃ 122/2026

| | | | |
|---|---|---|---|
| **ದಿನಾಂಕಃ 18.03.2026** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು. | | | |
| ಸಿಡಬ್ಲ್ಯೂಃ | 16 | ಪಿಡಬ್ಲ್ಯೂ | 8 |
| ಹೆಸರು | ಚಂದ್ರಶೇಖರ್ ಎಂ.ಎಸ್. | | |
| ತಂದೆ / ಗಂಡನ ಹೆಸರು | ಸದಾಶಿವಪ್ಪ | | |
| ವಯಸ್ಸು | 43 | | |
| ಉದ್ಯೋಗ | ಪಿ.ಎಸ್.ಐ. | | |
| ವಾಸ | ಮಧುಗಿರಿ | | |

**ಮುಖ್ಯ ವಿಚಾರಣೆಃ ಎ.ಪಿ.ಪಿ. ರವರಿಂದಃ**

ನಾನು ದಿಃ03.03-2023 ರಿಂದ ದಿಃ05-11-2025 ರ ವರೆಗೆ ತಾವರೆಕೆರೆ ಪೊಲೀಸ್ ಠಾಣೆಯಲ್ಲಿ PSI ಆಗಿ ಕರ್ತವ್ಯ ಮಾಡಿರುತ್ತೇನೆ.

2. ದಿಃ 21.01.2023 ರಂದು ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ಠಾಣಾ ಪ್ರಭಾರದಲ್ಲಿರುವಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಬೆರಳಚ್ಚು ದೂರನ್ನು ಪರಿಶೀಲಿಸಿ ಹಾಲಿ ಪ್ರಕರಣದಂತೆ ಪ್ರ.ವ.ವ.ಯನ್ನು ದಾಖಲಸಿಸಿರುತ್ತೇನೆ. ಸದರಿ ಪ್ರ.ವ.ವ.ಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗೆ ನಿವೇದಿಸಿಕೊಂಡಿರುತ್ತೇನೆ. ಹಾಲಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ 17 ರವರಿಗೆ ಕೊಟ್ಟಿರುತ್ತೇನೆ.

3. ಸಾಕ್ಷಿಯು ನಿಪಿ 1 ರ ದೂರಿನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವ.ಯನ್ನು ಮತ್ತು ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 13 ಮತ್ತು ಸಾಕ್ಷಿ ಸಹಿಯನ್ನು ನಿಪಿ 13(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ಎಂ.ಆರ್.ಯು ವಕೀಲರಿಂದಃ</u>**

ನಾನು ಹೇಳಿದಂತೆ ಚಾಸಾ 1 ರವರು ದೂರನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ಹಾಲಿ ಪ್ರಕರಣಕ್ಕೆ ಅನುಕೂಲವಾಗಲು ನಿಪಿ 1 ರ ದೂರನ್ನು ಸೃಷ್ಠಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಅಪರ ಹಿ.ಸಿ.ಜೆ ಮತ್ತು ಜೆ.ಎಮ್.ಎಫ್.ಸಿ.
ಶಿರಾ.